# ಅಭಿವೃದ್ಧಿ ನಮ್ಮೆಲ್ಲರ ಗುರಿಯಾಗಿರಲಿ

## ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ | ಸೇಂಟ್ ಜೋಸೆಫ್ ವಿವಿ ಉದ್ಘಾಟನೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ದೇಶದ ಯುವಜನರ ಪಾಲಿಗೆ ಮುಂದಿನ 25 ವರ್ಷಗಳು ಬಹಳ ಮುಖ್ಯವಾಗಿದೆ. ಈ ಅವಧಿಯಲ್ಲಿ ಭಾರತದ ಅಭಿವೃದ್ಧಿ ವಿಚಾರ ನಮ್ಮೆಲ್ಲರ ರಾಷ್ಟ್ರೀಯ ಗುರಿಯಾಗಬೇಕಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ.

ದಿ ಬೆಂಗಳೂರು ಜೆಸ್ಯೂಟ್ ಎಜುಕೇಷನಲ್ ಸೊಸೈಟಿಯು ನಗರದ ಲ್ಯಾಂಡ್‌ಫೋರ್ಡ್ ರಸ್ತೆಯಲ್ಲಿರುವ ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದ ಆವರಣದಲ್ಲಿ ಮಂಗಳವಾರ 'ಸೇಂಟ್ ಜೋಸೆಫ್ ವಿವಿ'ಯನ್ನು ಅಧಿಕೃತವಾಗಿ ಉದ್ಘಾಟಿಸಿ ಮಾತನಾಡಿದರು.

ಇಡೀ ವಿಶ್ವದಲ್ಲಿ ಭಾರತದಲ್ಲೇ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಯುವಕರಿದ್ದಾರೆ. ಅವರಿಗೆಲ್ಲ ಗುಣಮಟ್ಟದ ಶಿಕ್ಷಣ ಅಗತ್ಯವಿದೆ. ಅಂತಹ ಗುಣಮಟ್ಟದ ಶಿಕ್ಷಣವನ್ನು ವಿಶ್ವವಿದ್ಯಾಲಯಗಳು ನೀಡಬೇಕಿದೆ. ವಿದ್ಯಾರ್ಥಿಗಳಿಗೆ ನಾವು ಎಷ್ಟು ಪ್ರಮಾಣದಲ್ಲಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸಬಲ್ಲೆವು ಎಂಬುದರ ಮೇಲೆ ನಮ್ಮ ದೇಶದ ಭವಿಷ್ಯ ನಿರ್ಧರಿಸಲ್ಪಡಲಿದೆ. ಹಾಗಾಗಿ ಪ್ರತಿಯೊಂದು ಶಿಕ್ಷಣ ಸಂಸ್ಥೆಗಳು ವಿಶ್ವದರ್ಜೆಯ ಶಿಕ್ಷಣ ಸಂಸ್ಥೆಗಳಾಗಿ ಬೆಳೆಯುವ ಗುರಿಯನ್ನು ಹೊಂದಬೇಕಿದೆ ಎಂದು ಹೇಳಿದರು.

ವಿಜ್ಞಾನ ಮತ್ತು ತಂತ್ರಜ್ಞಾನ ದೇಶದ ಅಭಿವೃದ್ಧಿ ಬಹಳ ಮುಖ್ಯ ಪಾತ್ರ ವಹಿಸುತ್ತದೆ. ಈ ಕ್ಷೇತ್ರದಲ್ಲಿ ಸಾಧನೆಗೆ ಕೊನೆಯೇ ಇಲ್ಲ. ನಮ್ಮ ವಿದ್ಯಾರ್ಥಿಗಳು ಹೊಸ ಸಂಶೋಧನೆ, ನಾವೀನ್ಯತೆ, ಆವಿಷ್ಕಾರಗಳನ್ನು ನಡೆಸಬೇಕು. ಭಾರತವನ್ನು ಪ್ರತಿ ಕ್ಷೇತ್ರದಲ್ಲೂ ಅಭಿವೃದ್ಧಿಯೊಂದಿಗೆ ಸ್ವಾವಲಂಬಿ ರಾಷ್ಟ್ರವಾಗಿಸುವುದು ನಮ್ಮ ರಾಷ್ಟ್ರೀಯ ಗುರಿಯಾಗಬೇಕು ಎಂದರು.

ರಾಜ್ಯಪಾಲ ಥಾವರಚಂದ್ ಗೆಹಲೋತ್, ಉನ್ನತ ಶಿಕ್ಷಣ ಸಚಿವ ಡಾ. ಸಿ.ಎನ್. ಅಶ್ವತ್ಥನಾರಾಯಣ, ಬೆಂಗಳೂರು ಆರ್ಚ್ ಬಿಷಪ್ ಡಾ.ಪೀಟರ್ ಮಚಾಡೊ, ಸೇಂಟ್ ಜೋಸೆಫ್ ವಿವಿಯ ಕುಲಾಧಿಪತಿ ಫಾ. ಎಸ್.ಜೆ. ಡೈನಿಸಿಯಸ್ ವಾಸ್‌ಮತ್ತಿತರರಿದ್ದರು.



ವಿಜಯವಾಣಿ ಚಿತ್ರ

ಸೇಂಟ್ ಜೋಸೆಫ್ ವಿವಿ ಉದ್ಘಾಟನೆ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ರಾಜ್ಯಪಾಲ ಥಾವರಚಂದ್ ಗೆಹಲೋತ್, ಸಿಎಂ ಬೊಮ್ಮಾಯಿ, ಸಚಿವ ಅಶ್ವತ್ಥನಾರಾಯಣ, ಆರ್ಚ್ ಬಿಷಪ್ ಡಾ.ಪೀಟರ್ ಮಚಾಡೊ, ಸೇಂಟ್ ಜೋಸೆಫ್ ವಿವಿ ಕುಲಾಧಿಪತಿ ಫಾ. ಡೈನಿಸಿಯಸ್ ವಾಸ್ ಇದ್ದರು.

**ಕಳೆದ 140 ವರ್ಷಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ನಿರಂತರ ಸೇವೆ ಮಾಡುತ್ತಾ ಬೆಳೆದಿರುವ ಸೇಂಟ್ ಜೋಸೆಫ್ ಶಿಕ್ಷಣ ಸಂಸ್ಥೆಯು ಈಗ ವಿವಿ ಮಾನ್ಯತೆ ಪಡೆದಿರುವುದು ಶ್ಲಾಘನೀಯ. ಈ ಸಂಸ್ಥೆಯಲ್ಲಿ ಓದಿದ ಅನೇಕರು ಕಲೆ, ವಿಜ್ಞಾನ, ಕ್ರೀಡೆ, ತಂತ್ರಜ್ಞಾನ, ಸಾರ್ವಜನಿಕ ಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ತಮ್ಮದೇ ಆದ ಸೇವೆ ಸಲ್ಲಿಸುತ್ತಿರುವುದು ಇತರರಿಗೆ ಮಾದರಿ.**

**| ದ್ರೌಪದಿ ಮುರ್ಮು ರಾಷ್ಟ್ರಪತಿ**

### ಶಿಕ್ಷಣ ಕಲಿಕೆಗೆ ಬೆಂಗಳೂರು ಬೆಸ್ಟ್

**ಶತಮಾನದ ಇತಿಹಾಸವಿರುವ ಸೇಂಟ್ ಜೋಸೆಫ್ ಶಿಕ್ಷಣ ಸಂಸ್ಥೆಯು ರಾಜ್ಯ, ದೇಶದಲ್ಲೂ ಹೆಸರು ಮಾಡಿದೆ. ಶಿಕ್ಷಣ ಕ್ಷೇತ್ರದಲ್ಲಿ ನಿರಂತರ ಸೇವೆ ಮಾಡುವ ಮೂಲಕ ಸಮಾಜಕ್ಕೆ ಉತ್ತಮ ವಿದ್ಯಾರ್ಥಿಗಳನ್ನು ಕೊಡುಗೆಯಾಗಿ ನೀಡಿದೆ. ರಾಜ್ಯದ ಇಂತಹ ಶಿಕ್ಷಣ ಸಂಸ್ಥೆಗಳ ಫಲವಾಗಿ ದೇಶದ ಬೇರೆ ಬೇರೆ ರಾಜ್ಯದ ವಿದ್ಯಾರ್ಥಿಗಳ ಜತೆಗೆ ವಿದೇಶಿಯರ ಮಕ್ಕಳು ಕೂಡ ಇಂದು ತಮ್ಮ ಶಿಕ್ಷಣಕ್ಕೆ ಬೆಂಗಳೂರನ್ನು ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಗಣ್ಯಾತಿಗಣ್ಯರು ಬೆಂಗಳೂರಿಗೆ ಬಂದರೂ ವಿಧಾನಸೌಧಕ್ಕೆ ಬಾರದೆ ಇನ್ಫೋಸಿಸ್, ಇಸ್ರೋನಂತಹ ಕ್ಯಾಂಪಸ್‌ಗಳಿಗೆ ಭೇಟಿ ನೀಡುತ್ತಿದ್ದಾರೆ ಎಂದು ಸಿಎಂ ಬಸವರಾಜ ಬೊಮ್ಮಾಯಿ ತಿಳಿಸಿದರು.**